ಕರ್ನಾಟಕ ವಿಧಾನ ಪರಿಷತ್ತು
ನೂರ ಇಪ್ಪತ್ತೊಂಬತ್ತನೆಯ ಅಧಿವೇಶನ
ಕಾರ್ಯಕಲಾಪಗಳ ಪಟ್ಟಿ
ಗುರುವಾರ, ದಿನಾಂಕ: 09ನೇ ಜುಲೈ, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

******

01. ಪ್ರಶ್ನೋತ್ತರ

ಅ.	**ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು**	:	**ಒಂಭತ್ತನೆಯ ಪಟ್ಟಿ**
ಆ.	**ತಡೆಹಿಡಿಯಲಾದ ಪ್ರಶ್ನೆಗಳು:**		
	1) 4ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಅಮರನಾಥ ಪಾಟೀಲ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 53(548)	:	**ಮಾನ್ಯ ನಗರಾಭಿವೃದ್ಧಿ ಸಚಿವರು**
ಇ.	**ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು**	:	**ಒಂಭತ್ತನೆಯ ಪಟ್ಟಿ**

02. ವರದಿಯನ್ನೊಪ್ಪಿಸುವುದು

ಶ್ರೀ ಪುಟ್ಟಣ್ಣ (ಅಧ್ಯಕ್ಷರು, ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿ) ಅವರು 2013-15ನೇ ಸಾಲಿನ ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ ಮೊದಲನೆಯ ವರದಿಯನ್ನು ಒಪ್ಪಿಸುವುದು.

03. ನಿಯಮ 330ರ ಮೇರೆಗೆ

ಅ) ಶ್ರೀ ಕೋಟ ಶ್ರೀನಿವಾಸ ಪೂಜಾರಿ ಅವರು ದಿನಾಂಕ: 16.12.2014ರಂದು ನೀರಾವರಿ ಯೋಜನೆಗಳಿಗೆ ಸಂಬಂಧಿಸಿದಂತೆ ಸರ್ಕಾರವು ನೀಡಿದ್ದ ಭರವಸೆಗಳು ಅನುಷ್ಠಾನಗೊಳ್ಳದಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು)**

ಆ) ಶ್ರೀಯುತರುಗಳಾದ: ಮರಿತಿಬ್ಬೇಗೌಡ, ವೈ.ಎ.ನಾರಾಯಣಸ್ವಾಮಿ ಹಾಗೂ ಬಸವರಾಜ ಹೊರಟ್ಟಿ ಅವರುಗಳು ಪ್ರೌಢಶಾಲಾ ಸಹ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾಗಿ ಬಡ್ತಿ ಹಾಗೂ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಿಂದ ಪ್ರಾಂಶುಪಾಲರಾಗಿ ಬಡ್ತಿ ಹೊಂದುವಲ್ಲಿ ಉಂಟಾಗಿರುವ ಗಂಭೀರ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)**

04. ಗಮನ ಸೆಳೆಯುವ ಸೂಚನೆಗಳು

ಅ) ಶ್ರೀಯುತರುಗಳಾದ: ಅರುಣ ಶಹಾಪುರ ಹಾಗೂ ಕೋಟ ಶ್ರೀನಿವಾಸ ಪೂಜಾರಿ ಅವರುಗಳು ರಾಜ್ಯದಲ್ಲಿ ಕೊಳಚೆ ಪ್ರದೇಶಗಳ ನಿವಾಸಿಗಳಿಗೆ ಹಾಗೂ ಶಿವಮೊಗ್ಗ ನಗರ ವ್ಯಾಪ್ತಿಯಲ್ಲಿರುವ ಕೊಳಚೆ ನಿವಾಸಿಗಳಿಗೆ ಖಾಯಂ ಹಕ್ಕುಪತ್ರವನ್ನು ನೀಡದಿರುವ ಬಗ್ಗೆ **ಮಾನ್ಯ ವಸತಿ ಸಚಿವರ** ಗಮನ ಸೆಳೆಯುವುದು.

ಆ) ಶ್ರೀ ಬಸವರಾಜ ಹೊರಟ್ಟಿ ಅವರು ಹುಬ್ಬಳ್ಳಿಯ ಉಣಕಲ್ ಕೆರೆಯ ಜಲಕಳೆ ನಿಯಂತ್ರಣ ಮಾಡಿ ತುಂಬಿರುವ ಹೂಳನ್ನು ತೆಗೆದು ನೀರು ಸಂಗ್ರಹಣ ಸಾಮರ್ಥ್ಯವನ್ನು ಹೆಚ್ಚಿಸಲು ಅಗತ್ಯ ಕ್ರಮಕೈಗೊಳ್ಳುವ ಕುರಿತು **ಮಾನ್ಯ ನಗರಾಭಿವೃದ್ಧಿ ಸಚಿವರ** ಗಮನ ಸೆಳೆಯುವುದು.

05. ಅರ್ಧಗಂಟೆ ಕಾಲಾವಧಿ ಚರ್ಚೆ

ರಾಜ್ಯದ ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಒಳಪಡುವ ದೇವಸ್ಥಾನಗಳಲ್ಲಿ ಆನೆಗಳ ನಿರ್ವಹಣೆ ಬಗ್ಗೆ ದಿನಾಂಕ: 02.07.2015ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 59 (193)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಗೋ. ಮಧುಸೂದನ್** ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

ವಿ. ಶ್ರೀಶ್
ಕಾರ್ಯದರ್ಶಿ

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
www.kla.kar.nic.in/council.htm